# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗ್ರಾಮೀಣ/ವಿವಿದೋದ್ದೇಶ ಕಾರ್ಯಕರ್ತರಾಗಿ ಕಾರ್ಯ ನಿರ್ವಹಿಸುತ್ತಿರುವವರು ಕಾರ್ಯನಿರ್ವಹಿಸುತ್ತಿರುವ ಅವಧಿಯಲ್ಲಿ ಮರಣ ಹೊಂದಿದಲ್ಲಿ ಅವರ ಅವಲಂಬಿತರಿಗೆ ಪರಿಹಾರ ನೀಡಲು ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತು.

**ಓದಲಾಗಿದೆ:** ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆರವರ ಏಕಕಡತ ಸಂಖ್ಯೆ: ಇಸಿ/ಹೊ.ಯೋ/02/ಗ್ರಾ.ಪು.ಯೋ/2016-17.

**ಪ್ರಸ್ತಾವನೆ:**

2016-17ನೇ ಸಾಲಿನ ಆಯವ್ಯಯ ಭಾಷಣದ ಕ್ರಮ ಸಂಖ್ಯೆ: 155ರಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗ್ರಾಮೀಣ/ ವಿವಿದೋದ್ದೇಶ ಕಾರ್ಯಕರ್ತರಾಗಿ ಕಾರ್ಯ ನಿರ್ವಹಿಸುತ್ತಿರುವವರು ಕಾರ್ಯನಿರ್ವಹಿಸುತ್ತಿರುವ ಅವಧಿಯಲ್ಲಿ ಮರಣ ಹೊಂದಿದಲ್ಲಿ ಅವರ ಅವಲಂಬಿತರಿಗೆ ಪರಿಹಾರ ನೀಡಲಾಗುವುದೆಂದು ಘೋಷಿಸಲಾಗಿದೆ. ರಾಜ್ಯದಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆಯನ್ನು 2007-08ನೇ ಸಾಲಿನಿಂದ ರಾಜ್ಯ ಸಹಾಯಧನದಡಿ ಜಾರಿಗೊಳಿಸುತ್ತಿದ್ದು, ಸದರಿ ಯೋಜನೆಯಡಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ, ಗ್ರಾಮ ಪಂಚಾಯಿತಿಗೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕಿಗೆ ಒಬ್ಬರಂತೆ ವಿವಿದೋದ್ದೇಶ ಕಾರ್ಯಕರ್ತರನ್ನು ನೇಮಿಸಿಕೊಂಡು ಅವರ ಮುಖಾಂತರ ಅಂಗವಿಕಲರಿಗೆ ಸರ್ಕಾರದ ಸೇವಾ ಸೌಲಭ್ಯಗಳನ್ನು ಅವರು ವಾಸಿಸುವ ಸ್ಥಳಕ್ಕೆ ಒದಗಿಸಲಾಗುತ್ತದೆ. ರಾಜ್ಯದಲ್ಲಿ ಪ್ರಸ್ತುತ ಒಟ್ಟು 5632 ಗ್ರಾಮ ಪಂಚಾಯಿತಿಗಳು ಹಾಗೂ 176 ತಾಲ್ಲೂಕುಗಳಿದ್ದು, ಅವುಗಳಲ್ಲಿ 4672 ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ 166 ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು ಕಾರ್ಯನಿರ್ವಹಿಸುತ್ತಿದ್ದು, ಪ್ರತಿ ಮಾಹೆಯಾನ ಕ್ರಮವಾಗಿ ರೂ. 2000/- ಹಾಗೂ ರೂ. 5000/-ಗಳ ಗೌರವಧನವನ್ನು ನೀಡಲಾಗುತ್ತಿದೆ. ಗ್ರಾಮೀಣ ಅಂಗವಿಕಲರು ಕಾರ್ಯಕರ್ತರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಅವರುಗಳಿಗೆ ನೀಡಲಾಗುತ್ತಿರುವ ಗೌರವಧನದಲ್ಲಿ ತಮ್ಮ ಜೀವನ ನಿರ್ವಹಣೆ ಕಷ್ಟವಾಗಿದ್ದು, ಇನ್ನಿತರೆ ಹೆಚ್ಚಿನ ಕೆಲಸ ನಿರ್ವಹಿಸಲು ಸಾಧ್ಯವಾಗುವುದಿಲ್ಲ. ಸದರಿ ಕಾರ್ಯಕರ್ತರು ಕರ್ತವ್ಯದ ಅವಧಿಯಲ್ಲಿ ಮರಣ ಹೊಂದಿದಲ್ಲಿ ಇವರ ಆದಾಯದ ಮೇಲೆ ಅವಲಂಬಿತರಾಗಿರುವ ಕುಟುಂಬದ ಸದಸ್ಯರಿಗೆ ಪರಿಹಾರ ಧನವನ್ನು ಒದಗಿಸಬೇಕೆಂಬುದು ಅವರ ಬೇಡಿಕೆಯಾಗಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತರಿಗೆ ಸೇವಾ ಅವಧಿಯಲ್ಲಿ ಮರಣ ಹೊಂದಿದರೆ ಮರಣ ಪರಿಹಾರ ಧನ ನೀಡುತ್ತಿರುವಂತೆ ಗ್ರಾಮೀಣ/ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೂ ಸಹ ಮರಣ ಪರಿಹಾರ ಧನ ಒದಗಿಸುವುದು ಅವಶ್ಯಕವಾಗಿರುತ್ತದೆಂದು ತಿಳಿಸುತ್ತಾ ಯೋಜನೆಯ ರೂಪುರೇಷೆ ಹಾಗೂ ಮಾರ್ಗಸೂಚಿಯನ್ನು ರೂಪಿಸಿ, ತಡೆಪಟ್ಟಿಯೊಂದಿಗೆ ಸಲ್ಲಿಸಿರುತ್ತಾರೆ.

ಸದರಿ ಯೋಜನೆಯನ್ನು 2016-17ನೇ ಸಾಲಿಗೆ ಅನುಷ್ಠಾನಗೊಳಿಸಲು ರೂ. 10.00 ಲಕ್ಷಗಳ ಆಯವ್ಯಯದ ಅವಶ್ಯಕತೆಯಿದ್ದು, ಸದರಿ ಆಯವ್ಯಯವನ್ನು ಲೆಕ್ಕ ಶೀರ್ಷಿಕೆ:2235-02-101-0-53 ಯೋಜನೆ ಉಪ ಲೆಕ್ಕ ಶೀರ್ಷಿಕೆ-059 ಇತರೆ ವೆಚ್ಚಗಳಡಿ ಭರಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಮೇಲೆ ಓದಲಾದ ಏಕಕಡತದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಕೋರಿರುತ್ತಾರೆ.

..2

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 110 ಪಿಹೆಚ್‌ಪಿ 2016, ಬೆಂಗಳೂರು, ದಿನಾಂಕ:29.06.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗ್ರಾಮೀಣ/ವಿವಿದೋದ್ದೇಶ ಕಾರ್ಯಕರ್ತರಾಗಿ ಕಾರ್ಯ ನಿರ್ವಹಿಸುತ್ತಿರುವವರು ಕಾರ್ಯನಿರ್ವಹಿಸುತ್ತಿರುವ ಅವಧಿಯಲ್ಲಿ ಮರಣ ಹೊಂದಿದಲ್ಲಿ ಅವರ ಅವಲಂಬಿತರಿಗೆ ಪರಿಹಾರ ನೀಡುವ ಯೋಜನೆಯನ್ನು ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಈ ಆದೇಶದೊಂದಿಗಿನ ಅನುಬಂಧದಲ್ಲಿ ಲಗತ್ತಿಸಿರುವ ಮಾರ್ಗಸೂಚಿ ಹಾಗೂ ರೂಪುರೇಷೆಗಳಿಗೊಳಪಟ್ಟು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಈ ವೆಚ್ಚವನ್ನು 2016-17ನೇ ಸಾಲಿನ ಲೆಕ್ಕ ಶೀರ್ಷಿಕೆ:2235-02-101-0-53 ಯೋಜನೆ ಉಪ ಲೆಕ್ಕ ಶೀರ್ಷಿಕೆ-059 ಇತರೆ ಖರ್ಚುಗಳಡಿ ಒದಗಿಸಿರುವ ಆಯವ್ಯಯದಲ್ಲಿ ಭರಿಸತಕ್ಕದ್ದು.

ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 278 ವೆಚ್ಚ-3 2016, ದಿ:27.04.2016 ಮತ್ತು ಪಿಡಿ 20 ಐಎಂಎಂ 2016, ದಿ:20.05.2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಯಲಕ್ಷ್ಮಿ) 29/6/2016
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ",ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001
4. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು.
5. ಆಯುಕ್ತರು, ರಾಜ್ಯ ಅಂಗವಿಕಲ ವ್ಯಕ್ತಿಗಳ ಅಧಿನಿಯಮದ ಕಛೇರಿ ಕರ್ನಾಟಕ, ನಂ.55, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಕಟ್ಟಡ,ಅಭಯ ಸಂಕೀರ್ಣ,2ನೇ ಮಹಡಿ,ರಿಸಲ್ದಾರ್ ರಸ್ತೆ, ಶೇಷಾದ್ರಿ ಪುರಂ.ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ(10), ವಿಧಾನ ಸೌಧ, ಬೆಂಗಳೂರು
8. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಗಳು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
11. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ ಎಡಿಜಿಸಿ/ ಹೆಚ್ಚುವರಿ ಪ್ರತಿಗಳು.

## ಸರ್ಕಾರದ ಆದೇಶ ಸಂಖ್ಯೆ: ಮಮಇ 110 ಪಿಹೆಚ್‌ಪಿ 2016, ದಿನಾಂಕ:29.06.2016ಕ್ಕೆ ಅನುಬಂಧ (ಮಾರ್ಗಸೂಚಿ ಹಾಗೂ ರೂಪುರೇಷೆ)

### ಮರಣ ಪರಿಹಾರದ ಮೊತ್ತ:

ಗ್ರಾಮೀಣ ಪುನರ್ ವಸತಿ/ವಿವಿದೊದ್ದೇಶ ಪುನರ್‌ವಸತಿ ಕಾರ್ಯಕರ್ತರು ಕರ್ತವ್ಯ ನಿರತರಾಗಿದ್ದಾಗ ಮರಣ ಹೊಂದಿದಲ್ಲಿ ಅವರ ಕುಟುಂಬದ ವಾರಸುದಾರರಿಗೆ ರೂ.50,000/-ಗಳ ಮರಣ ಪರಿಹಾರವನ್ನು ನೀಡುವುದು.

### ಅರ್ಹತೆ:

ಗ್ರಾಮೀಣ ಪುನರ್‌ವಸತಿ/ವಿವಿದೊದ್ದೇಶ ಪುನರ್‌ವಸತಿ ಕಾರ್ಯಕರ್ತರು, ಗ್ರಾಮೀಣ ಪುನರ್‌ವಸತಿ ಯೋಜನೆಯಡಿ ಗೌರವಧನ ಆಧಾರದಲ್ಲಿ ಕನಿಷ್ಠ 3 ವರ್ಷ ಸೇವೆ ಸಲ್ಲಿಸುತ್ತಿದ್ದು, ಮರಣ ಸಮಯದಲ್ಲಿ ಕರ್ತವ್ಯ ನಿರತರಾಗಿರಬೇಕು.

### ವಾರಸುದಾರರು ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು:

- ಮರಣ ಪ್ರಮಾಣ ಪತ್ರ
- ವಾರಸುದಾರರ ಪತ್ರ
- ವಂಶವೃಕ್ಷ
- ಒಂದಕ್ಕಿಂತ ಹೆಚ್ಚು ಜನ ವಾರಸುದಾರರಿದ್ದಲ್ಲಿ ನಿರಪೇಕ್ಷಣಾ ಪ್ರಮಾಣ ಪತ್ರ
- ವಾರಸುದಾರರ ಬ್ಯಾಂಕ್ ಖಾತೆ ಸಂಖ್ಯೆ, ಬ್ಯಾಂಕಿನ ವಿವರಗಳೊಂದಿಗೆ
- ಗುರುತಿನ ಚೀಟಿ

### ಯೋಜನೆಯ ಅನುಷ್ಠಾನ:

- ಗ್ರಾಮೀಣ ಪುನರ್ ವಸತಿ/ವಿವಿದೊದ್ದೇಶ ಪುನರ್‌ವಸತಿ ಕಾರ್ಯಕರ್ತರಾಗಿ ಕರ್ತವ್ಯ ನಿರತರಾಗಿದ್ದಾಗ ಮರಣ ಹೊಂದಿದಲ್ಲಿ ಅವರ ವಾರಸುದಾರರು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಮರಣ ಪರಿಹಾರ ಕೋರಿ ಅರ್ಜಿಯನ್ನು ಸಲ್ಲಿಸುವರು.
- ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಸ್ತಾವನೆಯನ್ನು ಪರಿಶೀಲಿಸಿ ಮಂಜೂರಾತಿಗಾಗಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಲ್ಲಿಸುವುದು.
- ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಮಂಜೂರಾತಿ ಆದೇಶ ಪಡೆದು ಖಜಾನೆಯಿಂದ ಹಣವನ್ನು ಸೆಳೆದು ಆರ್.ಟಿ.ಜಿ.ಎಸ್ ಮೂಲಕ ವಾರಸುದಾರರ ಬ್ಯಾಂಕ್ ಖಾತೆಗೆ ಜಮಾ ಮಾಡುವುದು.

(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.